ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/110/2022–23

ದಿನಾಂಕ: 08–07–2024

## ಸುತ್ತೋಲೆ

ವಿಷಯ: "ಸಂಸ್ಥಾಪನಾ ದಿನಾಚರಣೆ" ಸಮಾರಂಭವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಕುಲಪತಿಯವರ ಟಿಪ್ಪಣಿ ಸಂಖ್ಯೆ:ಕುಪ/ಇತರೆ/2024–25, ದಿನಾಂಕ:04.07.2024.

****

ಮೈಸೂರು ವಿಶ್ವವಿದ್ಯಾನಿಲಯದ "ಸಂಸ್ಥಾಪನಾ ದಿನಾಚರಣೆ" ಸಮಾರಂಭವನ್ನು ದಿನಾಂಕ:29.07.2024ರಂದು ಬೆಳಗ್ಗೆ 11.00 ಗಂಟೆಗೆ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಈ ಸಮಾರಂಭದಲ್ಲಿ ಡಾ. ಗುರುರಾಜ್ ಕರಜಗಿ, ಅಧ್ಯಕ್ಷರು, ಸೃಜನಶೀಲ ಅಧ್ಯಾಪನ ಕೇಂದ್ರ, ಬೆಂಗಳೂರು ಇವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಸಂಸ್ಥಾಪನಾ ದಿನಾಚರಣೆಯ ವಿಶೇಷ ಉಪನ್ಯಾಸವನ್ನು ನೀಡುವರು ಮತ್ತು ಮಾನ್ಯ ಕುಲಪತಿಯವರಾದ ಪ್ರೊ. ಎನ್.ಕೆ. ಲೋಕನಾಥ್ ಇವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಅಧ್ಯಾಪಕರು/ಅಧ್ಯಾಪಕೇತರ ಉದ್ಯೋಗಿಗಳು/ಅತಿಥಿ ಉಪನ್ಯಾಸಕರು/ಸಂಶೋಧಕರು/ವಿದ್ಯಾರ್ಥಿಗಳು ದಿನಾಂಕ 29.07.2024 ರಂದು ಬೆಳಗ್ಗೆ 10.30 ಗಂಟೆಯೊಳಗೆ ಕ್ರಾಫರ್ಡ್ ಭವನದಲ್ಲಿ ಹಾಜರಿರಲು ತಿಳಿಸಿದೆ.

ಇದು ವಿಶ್ವವಿದ್ಯಾನಿಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವಾಗಿದ್ದು, ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಖಾಯಂ/ತಾತ್ಕಾಲಿಕ ಬೋಧಕರು, ಬೋಧಕೇತರರು, ಅತಿಥಿ ಉಪನ್ಯಾಸಕರು, ಸಂಶೋಧಕರು, ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸಬೇಕಾಗಿರುವುದು ಎಲ್ಲರ ಆದ್ಯ ಕರ್ತವ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಈ ಕಾರ್ಯಕ್ರಮಕ್ಕೆ ಹಾಜರಾತಿಯನ್ನು ಕಡ್ಡಾಯಗೊಳಿಸಲಾಗಿದ್ದು, ತಾವೆಲ್ಲರೂ **ಕಡ್ಡಾಯವಾಗಿ** ಭಾಗವಹಿಸಬೇಕಾಗಿ ತಿಳಿಸಿದೆ.

ಸದರಿ ಕಾರ್ಯಕ್ರಮ ಮುಗಿದ ನಂತರ ತಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ಹಾಜರಾಗುವುದು.

ಕುಲಸಚಿವ

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ ನಿರ್ದೇಶಕರು/ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು,
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
3. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ ಮೈಸೂರು.
4. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
5. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಇವರಿಗೆ ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
6. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು.
7. ಕಛೇರಿ ಪ್ರತಿ.

ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ ಅತಿಥಿ ಉಪನ್ಯಾಸಕರು ವಿದ್ಯಾರ್ಥಿಗಳು/ ಅಧ್ಯಾಪಕೇತರ ಉದ್ಯೋಗಿಗಳು/ಸಂಶೋಧಕರುಗಳ ಗಮನಕ್ಕೆ ತರಬೇಕೆಂದು ತಿಳಿಸಿದೆ. ಎಲ್ಲಾ ಉದ್ಯೋಗಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಸೂಕ್ತ ಕ್ರಮ ಕೈಗೊಂಡು ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸುವುದು

: Mr. Kantha to attend
18/07/2024

Scanned with OKEN Scanner